**ಕರ್ನಾಟಕ ಸರ್ಕಾರ**

ಸಂಖ್ಯೆ:ಸಕಇ 394 ಎಂಡಿಎಸ್ 2022

ಕರ್ನಾಟಕ ಸರ್ಕಾರ ಸಚಿವಾಲಯ
ವಿಕಾಸ ಸೌಧ,
ಬೆಂಗಳೂರು,ದಿನಾಂಕ:09.11.2022

**ಸುತ್ತೋಲೆ**

ವಿಷಯ: ವಸತಿ ನಿಲಯಗಳಲ್ಲಿ ಅಶುದ್ದ ಆಹಾರ ಸೇವಿಸಿ ವಿದ್ಯಾರ್ಥಿಗಳು ಅಸ್ವಸ್ಥರಾಗುತ್ತಿರುವ ಘಟನೆಗಳು ಪದೇ ಪದೇ ವರದಿಯಾಗುತ್ತಿರುವ ಬಗ್ಗೆ.

<<<>>>

ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ನಿಲಯಗಳಲ್ಲಿ ಹಾಗೂ ಶಾಲೆಗಳಲ್ಲಿ ಅಶುದ್ದ ಆಹಾರ ಸೇವಿಸಿ ವಿದ್ಯಾರ್ಥಿಗಳು ಅಸ್ವಸ್ಥರಾಗುತ್ತಿರುವ ಘಟನೆಗಳು ಪದೇ ಪದೇ ವರದಿಯಾಗುತ್ತಿರುವುದನ್ನು ಗಮನಿಸಿ ಕಲುಷಿತ ಆಹಾರ ಸೇವನೆ ತಡೆಗಟ್ಟಲು ಈ ಕೆಳಕಂಡಂತೆ ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ. ಅದರಂತೆ, ಕಡ್ಡಾಯವಾಗಿ ಪಾಲಿಸುವಂತೆ ಸೂಚಿಸಿದೆ.

1. ಅಡುಗೆ ತಯಾರಿಕೆಗೆ ಶುದ್ದ ಕುಡಿಯುವ ನೀರನ್ನು ಬಳಸುವುದು, ಅಡುಗೆ ಮಾಡುವ ಪಾತ್ರೆಗಳನ್ನು ಸಮರ್ಪಕವಾಗಿ ಶುಚಿಗೊಳಿಸುವುದು.
2. ಸರಬರಾಜಾಗುವ ಆಹಾರ ಪದಾರ್ಥಗಳ ಪೈಕಿ ಬೇಳೆ ಕಾಳುಗಳು ಹಾಗೂ ಇತರ ಧಾನ್ಯಗಳಲ್ಲಿ ಹುಳುಗಳು ಬರದಂತೆ ಬಿಸಿಲಿನಲ್ಲಿ ಒಣಗಿಸಿ ಶುಚಿಯಾಗಿರಿಸಿಕೊಳ್ಳುವುದು.
3. ಆಡುಗೆ ತಯಾರಕರು ಅಡುಗೆ ಕೋಣೆಯನ್ನು ಆಗಿಂದಾಗ್ಗೆ ಸ್ವಚ್ಛವಾಗಿರಿಸಿಕೊಳ್ಳುವುದರ ಜೊತೆಗೆ, ಏಪ್ರಾನ್ ಕ್ಯಾಪ್, ಗ್ಲೌಸ್‌ಗಳನ್ನು ಧರಿಸಿ ಅಡುಗೆ ತಯಾರು ಮಾಡುವುದು.
4. ವಸತಿ ಶಾಲೆ/ ಕಾಲೇಜುಗಳಲ್ಲಿ ಮೆಸ್ ಕಮಿಟಿಯನ್ನು ನಿಲಯಪಾಲಕ/ ನಿರ್ದಿಷ್ಟ, ಶಿಕ್ಷಕರ ನೇತೃತ್ವದಲ್ಲಿ ರಚಿಸಿ, ಇದರ ಮೇಲುಸ್ತುವಾರಿಯನ್ನು ಪ್ರಾಂಶುಪಾಲರಿಗೆ ನೀಡುವುದು ಈ ಮೂಲಕ ಪ್ರತಿದಿನ ತಯಾರಾಗುವ ಊಟೋಪಚಾರಗಳ ಗುಣಮಟ್ಟವನ್ನು ಕಾಯ್ದುಕೊಳ್ಳುವುದು.
5. ಪ್ರತಿ ದಿನ ತಯಾರಾಗುವ ಊಟೋಪಚಾರಗಳನ್ನು ವಿದ್ಯಾರ್ಥಿಗಳಿಗೆ ನೀಡುವ ಮುನ್ನ ಮೆಸ್ ಕಮಿಟಿ ಸದಸ್ಯರು ಸೇವಿಸಿ ಊಟದ ರುಚಿ, ಗುಣಮಟ್ಟದ ಕುರಿತು ಖಾತ್ರಿಪಡಿಸಿಕೊಳ್ಳುವುದು.
6. ಜಿಲ್ಲಾ ಮಟ್ಟದ ಅಧಿಕಾರಿಗಳು ಕಾಲಕಾಲಕ್ಕೆ ವಸತಿ ಶಾಲೆ/ ವಸತಿ ನಿಲಯಗಳಿಗೆ ಆಕಸ್ಮಿಕ ಭೇಟಿ ನೀಡುವ ಮೂಲಕ ವಿದ್ಯಾರ್ಥಿಗಳೊಂದಿಗೆ ಸಮಾಲೋಚಿಸಿ ಪ್ರತಿನಿತ್ಯ ನೀಡಲಾಗುತ್ತಿರುವ ಊಟೋಪಚಾರಗಳ ಕುರಿತು ಪರಿವೀಕ್ಷಿಸುವುದು.
7. ವಿದ್ಯಾರ್ಥಿಗಳ ಪೋಷಕರು ಬಾಹ್ಯ ಮೂಲಗಳಿಂದ ತರುವ ತಿಂಡಿ-ತಿನಿಸುಗಳನ್ನು ಕಡ್ಡಾಯವಾಗಿ ನಿರ್ಬಂಧಿಸುವುದು.
8. ಅಡುಗೆಯವರು/ ಅಡುಗೆ ಸಹಾಯಕರುಗಳಿಗೆ ಊಟೋಪಚಾರಗಳ ಸುರಕ್ಷತೆ/ಮಹತ್ವದ ಕುರಿತು ಕೈಪಿಡಿ/ತರಬೇತಿಗಳನ್ನು ನೀಡುವುದು.
9. ವಸತಿ ಶಾಲೆಗಳಿಗೆ ಒದಗಿಸಲಾಗುತ್ತಿರುವ ಆಹಾರ ಪದಾರ್ಥಗಳ ಗುಣಮಟ್ಟವನ್ನು ಕಾಯ್ದುಕೊಳ್ಳುವಂತೆ ಸರಬರಾಜುದಾರರಿಗೆ ಸೂಚಿಸುವುದು. ತಪ್ಪಿದಲ್ಲಿ ಕಪ್ಪುಪಟ್ಟಿಗೆ ಸೇರಿಸುವ ಎಚ್ಚರಿಕೆಯನ್ನು ನೀಡುವುದು.
10. ತರಕಾರಿಗಳು, ಮೀನು, ಮೊಟ್ಟೆ, ಮಾಂಸ, ಹಾಲು ಇವೇ ಮೊದಲಾದ ಬೇಗ ನಶಿಸಿ ಹೋಗುವ ಪದಾರ್ಥಗಳನ್ನು ಪ್ರತಿ ದಿನ ಸರಬರಾಜು ಪಡೆಯಲು ಕ್ರಮವಹಿಸುವುದು.

-----2

ಈ ಎಲ್ಲಾ ಅಂಶಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ವಸತಿ ಶಾಲೆಯ ಪ್ರಾಂಶುಪಾಲರು ಸಂಬಂಧಿಸಿದ ಸಿಬ್ಬಂದಿಗಳಿಗೆ ಸೂಚನೆ ನೀಡುವುದು. ಈ ಬಗ್ಗೆ ಏನಾದರೂ ಲೋಪ ಉಂಟಾದಲ್ಲಿ ಸಂಬಂಧಪಟ್ಟ ಪ್ರಾಂಶುಪಾಲರು ಮತ್ತು ಸಿಬ್ಬಂದಿಗಳ ವಿರುದ್ಧ ನಿಯಮಾನುಸಾರ ಶಿಸ್ತುಕ್ರಮ ಕೈಗೊಳ್ಳುವಂತೆ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಇವರಿಗೆ ಸೂಚಿಸಿದೆ.

(ಶಂಭುಲಿಂಗಯ್ಯ)
ಸರ್ಕಾರದ ಉಪ ಕಾರ್ಯದರ್ಶಿ-2
ಸಮಾಜ ಕಲ್ಯಾಣ ಇಲಾಖೆ.

**ಇವರಿಗೆ:**

1. ಆಯುಕ್ತರು ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
2. ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
4. ಎಲ್ಲಾ ಜಂಟಿ/ ಉಪ ನಿರ್ದೇಶಕರು, ಸಮಾಜ ಕಲ್ಯಾಣ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ. (ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು ಇವರ ಮೂಲಕ).
5. ಎಲ್ಲಾ ವಸತಿ ಶಾಲೆಯ ಪ್ರಾಂಶುಪಾಲರಿಗೆ (ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು ಇವರ ಮೂಲಕ).

**ಪ್ರತಿಗಳು:**

1. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಧಾನ ಸೌಧ.
2. ಸರ್ಕಾರದ ಕಾರ್ಯದರ್ಶಿಗಳು ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.